ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) ರಾಜ್ಯದ ಯಾವುದೇ ಜಿಲ್ಲೆಯ ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ಸ್ಟಾಂಪ್ ಪೇಪರ್ ಮಾರುವ ವ್ಯವಸ್ಥೆ ಇರುವುದಿಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಈಗಾಗಲೇ ಕೈಗೊಳ್ಳಲಾಗಿದೆ. ಪ್ರತಿ ತಾಲ್ಲೂಕಿನ ಉಪಖಜಾನೆಯಲ್ಲಿ ಈ ಅನುಕೂಲ ಇದೆ.

ಜವಾಹರ್ ರೋಜ್‌ಗಾರ್ ಯೋಜನೆಯ ಬಗ್ಗೆ

336 (788): ಶ್ರೀ ಸಿದ್ಧನಗೌಡರ್, ಪಿ. ಸಿ. (ಕಲಘಟಗಿ)

ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಜವಾಹರ್ ರೋಜ್‌ಗಾರ್ ಯೋಜನೆಯ ಕಾಮಗಾರಿಗಳಿಗೆ ಈಗ ಮಂಡಲ ಪಂಚಾಯ್ತಿ ಮೂಲಕ ಹಣ ಕೊಡುತ್ತಾ ಇರುವುದು ನಿಜವೇ ?

ಆ) ಹಾಗಿದ್ದಲ್ಲಿ, ಇದರಿಂದ ಕೆಲಸ ಕಾರ್ಯಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ, ಇನ್ನು ಮುಂದೆ ಜವಾಹರ್ ರೋಜ್‌ಗಾರ್ ಯೋಜನೆಯ ಕಾರ್ಯಕ್ರಮಗಳಿಗೆ ನೀಡುವ ಹಣವನ್ನು ಬಿ. ಡಿ. ಒ.ರವರ ಮೂಲಕ ನೀಡಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ನಿಜ

ಆ) ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಬೆಂಗಳೂರು ದಕ್ಷಿಣ ತಾಲ್ಲೂಕು ತಾವರೆಕೆರೆ ಹೋಬಳಿ ಹುಲುಮೇನ ಹಳ್ಳಿ ಗ್ರಾಮ ಪಂಚಾಯತಿಗೆ ಸೇರಿದ ಸ.ನಂ. 61ರ ವಿಸ್ತೀರ್ಣ

337 (762): ಶ್ರೀ ಪಿ. ಸಿ. ಸಿದ್ಧನಗೌಡರ್ (ಕಲಘಟಗಿ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ದಕ್ಷಿಣ ತಾಲ್ಲೂಕು ತಾವರೇಕೆರೆ ಹೋಬಳಿ ಹುಲುಮೇನಹಳ್ಳಿ ಗ್ರಾಮ ಪಂಚಾಯ್ತಿಗೆ ಸೇರಿದ ಮಾದಪಟ್ಟ ಗ್ರಾಮದ ಸರ್ವೆ ನಂ. 61ರ ವಿಸ್ತೀರ್ಣ ಎಷ್ಟು ?

ಆ) ಮೇಲ್ಕಂಡ ಜಮೀನಿನ ಸಾಗುವಳಿ ಮಾಡುತ್ತಿರುವ ಸಾಗುವಳಿಗಾರ ಯಾರು ಇವರು ಎಷ್ಟು ವರ್ಷಗಳಿಂದ ಸಾಗುವಳಿ ಮಾಡುತ್ತಿದ್ದಾರೆ ?

ಇ) ಈ ಸಾಗುವಳಿದಾರರನ್ನು ಸರ್ಕಾರ ಈಗ ಕೈ ಬಿಡಿಸಿರಲು ಕಾರಣವೇನು ?

ಈ) ಸರ್ಕಾರ ಮತ್ತೆ ಯಾವ ಜಾಗದಲ್ಲಿ ಈ ಮೇಲ್ಕಂಡ ಸಾಗುವಳಿದಾರರಿಗೆ ಸಾಗುವಳಿ ಮಾಡಲು ಜಮೀನು ಮಂಜೂರು ಮಾಡುವುದು ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) ಎರಡು ಎಕರೆ

ಆ) ಶ್ರೀ ಚಿಕ್ಕನರಸಯ್ಯ, ಬಿನ್ ಕೆಂಪನರಸಯ್ಯ ಎಂಬುವವರು ಸುಮಾರು 25 ವರ್ಷಗಳಿಂದ ಸಾಗುವಳಿ ಮಾಡುತ್ತಿದ್ದಾರೆ.

ಇ) ಸರದಿ ಜಮೀನು ಹಿಡುವಳಿ ಜಮೀನು ಆಗಿರುವುದರಿಂದ ಇವರನ್ನು ಖುಲ್ಲಾ ಪಡಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಉದ್ಭವಿಸುವದಿಲ್ಲ.

ರಾಜ್ಯದಲ್ಲಿ ತೆಂಗಿನ ಬೆಳೆಗೆ ತಗುಲಿರುವ ರೋಗ ತಡೆಯಲು ತೆಗೆದುಕೊಂಡ ಕ್ರಮಗಳು

341 (941): ಶ್ರೀ ಪಿ. ಜಿ. ಆರ್. ಸಿಂಧ್ಯಾ (ಕನಕಪುರ)

ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ತೆಂಗು ಬೆಳೆಗೆ ರೋಗ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಇದನ್ನು ತಡೆಗಟ್ಟಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಎ. ಕೃಷ್ಣಪ್ಪ (ತೋಟಗಾರಿಕೆ ಮಂತ್ರಿಗಳು):–

ಅ) ಹೌದು

ಆ) ತೆಂಗಿನ ಬೆಳೆಗೆ ಕರ್ನಾಟಕ ರಾಜ್ಯದಲ್ಲಿ ರೋಗ ಯಾವುದೂ ತೀವ್ರವಾಗಿರುವುದಿಲ್ಲ. ಆದರೆ ಕಪ್ಪುತಲೆ ಹುಳುವಿನ ಭಾದೆ ಬೆಂಗಳೂರು (ಗ್ರಾಮಾಂತರ), ಬೆಂಗಳೂರು (ನಗರ), ತುಮಕೂರು ಮೈಸೂರು, ಮಂಡ್ಯ, ಹಾಸನ, ಶಿವಮೊಗ್ಗ, ಚಿತ್ರದುರ್ಗ, ಕೋಲಾರ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಸ್ವಲ್ಪ ಹೆಚ್ಚಾಗಿ ಹಾಗೂ ಉತ್ತರ ಕನ್ನಡ ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಕಡಿಮೆ ಪ್ರಮಾಣದಲ್ಲಿ ಹರಡಿದೆ.

ಈ ಕೀಟ ನಿಯಂತ್ರಣ ಮಾಡಲು ಸರ್ಕಾರವು ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.

1. ರಾಜ್ಯದ 11 ಜಿಲ್ಲೆಗಳಲ್ಲಿ ಪರೋಪಜೀವಿಗಳನ್ನು ವೃದ್ಧಿಪಡಿಸಿ ಬಾಧೆಗೊಳಗಾದ ತೋಟಗಳಲ್ಲಿ ಉಚಿತವಾಗಿ ಬಿಡುಗಡೆ ಮಾಡಲು 50 ಪ್ರಯೋಗ ಶಾಲೆಗಳನ್ನು (45 ಸಣ್ಣ ಮತ್ತು 4 ದೊಡ್ಡವು ಜಿಲ್ಲಾಪರಿಷತ್ ಯೋಜನೆಯಡಿ ಮತ್ತು ಒಂದು ದೊಡ್ಡದು ರಾಜ್ಯವಲಯದಡಿ) ತೆರೆಯಲಾಗಿದೆ. ಡಿಸೆಂಬರ್ 92ರ ಅಂತ್ಯದವರೆಗೆ 57.50 ಲಕ್ಷ ಪರೋಪಜೀವಿಗಳನ್ನು 2,703 ರೈತರುಗಳ ಕೀಟ ಬಾಧೆಯಿರುವ ತೋಟಗಳಲ್ಲಿ ಉಚಿತವಾಗಿ ಬಿಡುಗಡೆ ಮಾಡಲಾಗಿದೆ.

2. ತೆಂಗು ಅಭಿವೃದ್ಧಿ ಮಂಡಳಿಯ ಸಹಾಯ ಧನದೊಂದಿಗೆ 3 ಬೃಹತ್ ಪ್ರಮಾಣದ ಪರೋಪಜೀವಿ ವೃದ್ಧಿಪಡಿಸುವ ಪ್ರಯೋಗಶಾಲೆಗಳನ್ನು ತಿಪಟೂರು, ಉಡುಪಿ ಮತ್ತು ಹೊಸದುರ್ಗಗಳಲ್ಲಿ ಸ್ಥಾಪಿಸಿ,